ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2014–15ನೇ ಸಾಲಿಗೆ ಪಾಲಿಕೆಗೆ ಹೊಸದಾಗಿ ಸೇರ್ಪಡೆಗೊಂಡ ನಗರಸಭೆ ಮತ್ತು ಪುರಸಭೆಗಳ ವಿಶೇಷ ಅನುದಾನದ ಕಾಮಗಾರಿಗಳ ಕ್ರಿಯಾ ಯೋಜನೆಗೆ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ: 1. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಇವರ ಪತ್ರ ಸಂಖ್ಯೆ: ಮುಲೆಅ/ಆಯವ್ಯಯ/ಪಿಆರ್/6586/2014–15, ದಿನಾಂಕ: 10–11–2014.

2. ಸರ್ಕಾರಿ ಪತ್ರ ಸಂಖ್ಯೆ: ನಅಇ 745 ಎಂಎನ್‌ವೈ 2014, ದಿನಾಂಕ: 19–01–2015.

3. ಸರ್ಕಾರಿ ಆದೇಶ ಸಂಖ್ಯೆ: ನಅಇ 745 ಎಂಎನ್‌ವೈ 2015, ದಿನಾಂಕ: 29–01–2015.

4. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಇವರ ಪತ್ರ ಸಂಖ್ಯೆ: ಮುಲೆಅ/ಆಯವ್ಯಯ/ಪಿಆರ್/6586–ಎ/2014–15, ದಿನಾಂಕ: 22–01–2015.

ಪ್ರಸ್ತಾವನೆ:

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರು ಮೇಲೆ (1) ರಲ್ಲಿ ಓದಲಾದ ಪತ್ರದಲ್ಲಿ 2014–15ನೇ ಸಾಲಿನ ಆಯವ್ಯದಲ್ಲಿ ಮಾನ್ಯ ಮುಖ್ಯಮಂತ್ರಿಗಳು ಪಾಲಿಕೆಗೆ ಹೊಸದಾಗಿ ಸೇರ್ಪಡೆಗೊಂಡಿರುವ ಹಿಂದಿನ 7 ನಗರ ಸಭೆ ಮತ್ತು 1 ಪುರಸಭೆಯ ವ್ಯಾಪ್ತಿಯಲ್ಲಿ ಹಿಂದುಳಿದ ಪ್ರದೇಶಗಳಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ವಿಶೇಷ ಅನುದಾನವಾಗಿ ರೂ.25.00 ಕೋಟಿಗಳನ್ನು ನೀಡುವುದಾಗಿ ಘೋಷಿಸಿರುತ್ತಾರೆ. ಈ ರೀತಿ ಸೇರ್ಪಡೆಗೊಂಡ ಸದರಿ ಪ್ರದೇಶಗಳಲ್ಲಿ ವಿಶೇಷ ಅಭಿವೃದ್ಧಿ ಕಾಮಗಾರಿಗಳನ್ನು ಹಮ್ಮಿಕೊಳ್ಳಲಾಗಿದ್ದು, ಕೆಲವು ಕಾಮಗಾರಿಗಳು ಮುಕ್ತಾಯವಾಗಿದ್ದು, ಇನ್ನೂ ಕೆಲವು ಕಾಮಗಾರಿಗಳು ಪ್ರಗತಿಯ ಹಂತದಲ್ಲಿರುತ್ತವೆ. ಪ್ರಸ್ತುತ ಪಾಲಿಕೆಯ ಆರ್ಥಿಕ ಪರಿಸ್ಥಿತಿ ಸಂಕಷ್ಟದಲ್ಲಿದ್ದು, ಪೂರ್ಣಗೊಂಡ ಕಾಮಗಾರಿಗಳ ಬಿಲ್ಲುಗಳ ಮೊತ್ತಗಳನ್ನು ಪಾಲಿಕೆಯ ಸಂಪನ್ಮೂಲಗಳಿಂದ ಪಾವತಿಸಲು ಕಷ್ಟಕರವಾಗಿದ್ದು, ಸದರಿ ಪ್ರದೇಶದಲ್ಲಿ ಕೈಗೊಂಡಿರುವ ಅಭಿವೃದ್ಧಿ ಕಾಮಗಾರಿಗಳಿಗಾಗಿ **ರೂ.250.00 ಕೋಟಿಗಳನ್ನು ಬಿಡುಗಡೆ ಮಾಡುವಂತೆ ಕೋರಿದ್ದರು.**

2. ಮೇಲೆ (2) ರಲ್ಲಿ ಓದಲಾದ ಸರ್ಕಾರದ ಪತ್ರದಲ್ಲಿ ಬಿ.ಬಿ.ಎಂ.ಪಿ.ಯ ವ್ಯಾಪ್ತಿಗೆ ಸೇರ್ಪಡೆಗೊಂಡ ಹಿಂದಿನ ನಗರ ಸಭೆ ಮತ್ತು ಪುರಸಭೆಗಳ ಹಿಂದುಳಿದ ಪ್ರದೇಶಗಳನ್ನು ರೂ.250.00 ಕೋಟಿಗಳ (ಇನ್ನೂರಾ ಐವತ್ತು ಕೋಟಿಗಳು ಮಾತ್ರ) ವೆಚ್ಚದಲ್ಲಿ ಅಭಿವೃದ್ಧಿಪಡಿಸಲು ಸರ್ಕಾರದ ತಾತ್ವಿಕ ಅನುಮೋದನೆಯನ್ನು ಮತ್ತು ಈ ಕೆಳಕಂಡಂತೆ ಅನುದಾನವನ್ನು ಹಂಚಿಕೆ ಮಾಡಲು ಅನುಮೋದನೆ ನೀಡಲಾಗಿದೆ.

ಕ್ರಮ ಸಂಖ್ಯೆ	ವಿಧಾನಸಭಾ ಕ್ಷೇತ್ರದ ಹೆಸರು	ಅನುದಾನ (ರೂ.ಕೋಟಿಗಳಲ್ಲಿ)
1	ಕೆ.ಆರ್.ಪುರಂ	45.00
2	ಯಶವಂತಪುರ	45.00
3	ರಾಜರಾಜೇಶ್ವರಿ ನಗರ	45.00
4	ಬ್ಯಾಟರಾಯನಪುರ	40.00

5	ಬೆಂಗಳೂರು ದಕ್ಷಿಣ	20.00
6	ಯಲಹಂಕ	15.00
7	ಮಹದೇವಪುರ	20.00
8	ದಾಸರಹಳ್ಳಿ	15.00
9	ಆನೇಕಲ್	5.00

3. ಮುಂದುವರೆದು, ಈ ಮೇಲ್ಕಂಡ ಅನುದಾನಕ್ಕೆ ಅನುಗುಣವಾಗಿ ವಿಧಾನಸಭಾ ಕ್ಷೇತ್ರವಾರು ಕಾಮಗಾರಿಗಳ ಕ್ರಿಯಾ ಯೋಜನೆಯನ್ನು ತಯಾರಿಸಿ, ಸಕ್ಷಮ ಪ್ರಾಧಿಕಾರದ ಮಂಜೂರಾತಿ ಪಡೆದು ಸರ್ಕಾರದ ಅನುಮೋದನೆಗೆ ಪ್ರಸ್ತಾವನೆಯನ್ನು ಕಳುಹಿಸಿಕೊಡುವಂತೆ ಮತ್ತು ಸದರಿ ಕಾಮಗಾರಿಗಳಿಗೆ ಹಣವನ್ನು ಮುಂದಿನ ಆರ್ಥಿಕ ವರ್ಷದಲ್ಲಿ ಬಿ.ಬಿ.ಎಂ.ಪಿ.ಗೆ ಹಂಚಿಕೆ ಮಾಡುವ ಒಟ್ಟಾರೆ ಅನುದಾನದಲ್ಲಿ ಬಿಡುಗಡೆ ಮಾಡಲಾಗುವುದೆಂದು ಸಹ ತಿಳಿಸಲಾಗಿದೆ.

4. ಮೇಲೆ(3) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಕೆ.ಆರ್.ಪುರಂ, ಯಶವಂತಪುರ ಮತ್ತು ರಾಜರಾಜೇಶ್ವರಿನಗರ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿನ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಸೇರಿದ ನಗರಸಭೆ ಮತ್ತು ಪುರಸಭಾ ಕ್ಷೇತ್ರಗಳ ಅಭಿವೃದ್ಧಿಗಾಗಿ ರೂ.135.00 ಕೋಟಿಗಳ ಕಾಮಗಾರಿಗಳ ಕ್ರಿಯಾಯೋಜನೆಗೆ ಸರ್ಕಾರದ ಅನುಮೋದನೆಯನ್ನು ನೀಡಲಾಗಿರುತ್ತದೆ.

5. ಈಗ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರು ಮೇಲೆ (4)ರಲ್ಲಿ ಓದಲಾದ ಪತ್ರದಲ್ಲಿ ಬ್ಯಾಟರಾಯನಪುರ ವಿಧಾನ ಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ರೂ.40.00 ಕೋಟಿಗಳ ಕಾಮಗಾರಿಯ ಕ್ರಿಯಾ ಯೋಜನೆಯ ಪಟ್ಟಿಯನ್ನು ಲಗತ್ತಿಸಿ ಕಳುಹಿಸುತ್ತಾ, ಕ್ರಿಯಾ ಯೋಜನೆಯ ಕಾಮಗಾರಿಗಳು ರಸ್ತೆ ಅಭಿವೃದ್ಧಿಗೆ ಸಂಬಂಧಿಸಿದ್ದು, ಮಳೆಗಾಲ ಪ್ರಾರಂಭಗೊಳ್ಳುವ ಮುನ್ನವೇ ಕಾಮಗಾರಿಗಳನ್ನು ಅನುಷ್ಠಾನಗೊಳಿಸಬೇಕಾಗಿರುವುದರಿಂದ 2014–15ನೇ ಸಾಲಿನ ಆಯವ್ಯಯದಲ್ಲಿ ಈಗಾಗಲೇ ಘೋಷಿಸಲಾಗಿರುವ ರೂ.250.00 ಕೋಟಿಗಳ ವಿಶೇಷ ಅನುದಾನದಲ್ಲಿ ಮೇಲ್ಕಂಡ ಕ್ರಿಯಾ ಯೋಜನೆಗೆ ಸರ್ಕಾರದ ಅನುಮೋದನೆ ಮತ್ತು ಕಾಮಗಾರಿ ಸಂಖ್ಯೆಗಳನ್ನು ನೀಡಿ ಕಾಮಗಾರಿಗಳನ್ನು ಪ್ರಾರಂಭಿಸಲು ಸರ್ಕಾರದ ಅನುಮೋದನೆಯನ್ನು ಕೋರಿರುತ್ತಾರೆ.

6. ಆಯುಕ್ತರ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ನಅಇ 745 ಎಂಎನ್‌ವೈ 2014,
ಬೆಂಗಳೂರು, ದಿನಾಂಕ: 05–03–2015.

7. ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಬ್ಯಾಟರಾಯನಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿನ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಸೇರಿದ ನಗರ ಸಭೆ ಮತ್ತು ಪುರಸಭೆ ಕ್ಷೇತ್ರಗಳ ಅಭಿವೃದ್ಧಿಗಾಗಿ ರೂ.40.00 ಕೋಟಿಗಳ (ನಲವತ್ತು ಕೋಟಿ ರೂಪಾಯಿಗಳು) ವೆಚ್ಚದ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದಲ್ಲಿ ತಿಳಿಸಿರುವ ಕಾಮಗಾರಿಗಳ ಕ್ರಿಯಾ ಯೋಜನೆಗೆ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ಅನುಮೋದನೆ ನೀಡಲಾಗಿದೆ.

(1) ಅನುಮೋದನೆಗೊಂಡ ಕಾಮಗಾರಿಗಳಿಗೆ ಅಂದಾಜು ಪಟ್ಟಿಗಳನ್ನು ಸಿದ್ಧಪಡಿಸಿ, ಸಕ್ಷಮ ಪ್ರಾಧಿಕಾರಿಗಳಿಂದ ತಾಂತ್ರಿಕ ಮತ್ತು ಆಡಳಿತಾತ್ಮಕ ಅನುಮೋದನೆ ಪಡೆಯುವುದು.

(2) ಕಾಮಗಾರಿಗಳನ್ನು ಅನುಷ್ಠಾನಗೊಲಿಸುವ ಮುನ್ನ ಕೆ.ಟಿ.ಪಿ.ಪಿ. ಕಾಯ್ದೆ/ನಿಯಮಗಳು ಮತ್ತು ಟೆಂಡರ್ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

. . . 3 .

(3) ಕಾಮಗಾರಿಗಳು ಪುನರಾವರ್ತಿತವಾಗದಂತೆ ನೋಡಿಕೊಳ್ಳತಕ್ಕದ್ದು.

(4) ಅನುಮೋದನೆಗೊಂಡ ಕಾಮಗಾರಿಗಳನ್ನು ಬದಲಾವಣೆ ಮಾಡಲು ಅವಕಾಶ ಇರುವುದಿಲ್ಲ.

(5) ಕ್ರಿಯಾ ಯೋಜನೆಯಂತೆ ಕಾಮಗಾರಿಗಳನ್ನು ಕೈಗೊಂಡು, ಕಾಮಗಾರಿಗಳು ಪೂರ್ಣಗೊಂಡ ನಂತರ ಮುಂದಿನ ಆರ್ಥಿಕ ವರ್ಷದಲ್ಲಿ ಹಣವನ್ನು ಬಿಡುಗಡೆ ಮಾಡಲು ವಿವರವಾದ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎನ್. ಗೋಪಾಲಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ (ಬಿ.ಬಿ.ಎಂ.ಪಿ.)
ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ, ಬೆಂಗಳೂರು – 560 001

(ಎನ್.ಗೋಪಾಲಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ (ಬಿ.ಬಿ.ಎಂ.ಪಿ).

ಇವರಿಗೆ:-

1) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2) ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
4) ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
5) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-9),
6) ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
7) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು/ಕಂಪೆಂಡಿಯಂ/ಇಲಾಖಾ ವೆಬ್‌ಸೈಟ್.